**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No**.1/2022

**PW**. 7

**CW**. 7

**ಸಾಕ್ಷಿಯ ಹೆಸರು** **–ಸುರೇಶ ಪಿ ಎಸ್**

**ತಂದೆಯ ಹೆಸರು** **–ಶಂಕರ**

**ವಯಸ್ಸು** **–53 ವರ್ಷಗಳು** ದಿನಾಂಕ 15–10–2025 ರಂದು ಪ್ರಮಾಣವಚನ ಬೋಧಿಸಲಾಯಿತು.

**ಉದ್ಯೋಗ** **–ಕೂಲಿ ಕೆಲಸ**

**ವಾಸಸ್ಥಳ** **– ದೊಡ್ಡಹೊನ್ನುರು ಪಿರಿಯಾಪಟ್ಟಣ ತಾಃ**

**ಮುಖ್ಯ ವಿಚಾರಣೆಃ– ಸರ್ಕಾರಿ ಅಭಿಯೋಜಕರಿಂದಃ–**

ಆರೋಪಿ ಗೊತ್ತು. ಚಾಸಾ–8 ಮತ್ತು 9 ರವರು ಗೊತ್ತು. ಅವರ ಜಮೀನನ್ನು ನಾನು ನೋಡಿಲ್ಲ. ಈಗ್ಗೆ 6 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸರು ಒಂದು ಪಂಚನಾಮೆಗೆ ನನ್ನ ಸಹಿ ಪಡೆದರು. ಅದನ್ನು ಈಗಾಗಲೇ ನಿಪಿ–3 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ–3(ಸಿ) ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಪೊಲೀಸರು ಚಾಸಾ–7 ಮತ್ತು 8 ರವರ ಜಮೀನಿಲ್ಲಿ ಆರೋಪಿ ಕಲ್ಲುಕೊರೆ ಮಾಡುತ್ತಿದ್ದ ಸ್ಥಳದಲ್ಲಿ ಪಂಚನಾಮೆ ಮಾಡಿಲ್ಲ.

(**ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೇಳಿದ್ದು ಸಾಕ್ಷಿಯ ಸಾಕ್ಷ್ಯ ಮತ್ತು ಇತರೆ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು**.)

**SC No.1/2022**
**PW.7**

**ಪಾಟೀಸವಾಲುಃ- ಸರ್ಕಾರಿ ಅಭಿಯೋಜಕರಿಂದಃ-**

ಚಾಸಾ-7 ಮತ್ತು 8 ರವರ ಜಮೀನಿನಲ್ಲಿ ಆರೋಪಿ ಕಲ್ಲುಕೊರೆ ಗಣಿಗಾರಿಕೆ ಮಾಡುತ್ತಿದ್ದ ಎಂದರೆ ನನಗೆ ಗೊತ್ತಿಲ್ಲ. ಆ ಬಗ್ಗೆ ಚಾಸಾ-1 ರವರು ದೂರು ನೀಡಿದ ಸಂಬಂಧವಾಗಿ ದಿಃ 01-07-2019 ರಂದು ಮಧ್ಯಾಹ್ನ 12.30 ರಿಂದ 1.15 ರವರೆಗೆ ನನ್ನ ಸಮಕ್ಷಮ ಪೊಲೀಸರು. ಸ್ಥಳದಲ್ಲಿ ಪಂಚನಾಮೆ ಮಾಡಿ ಓದಿ ಹೇಳಿ ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ- ಆರೋಪಿ ಪರ ಶ್ರೀ ಬಿ ಎಸ್ ವೈ ವಕೀಲರಿಂದಃ-**

ಏನೂ ಇಲ್ಲ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.